ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

**ಸಂಖ್ಯೆ : ಸಿ5(2) ಪಸ.ಮುಂಬಡ್ತಿ:79/2020-21** ದಿನಾಂಕ: 07-08-2021

**::ಅಧಿಸೂಚನೆ ::**

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2] ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3] ದಿನಾಂಕ : 26-07-2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4] ನೀವು ಸಲ್ಲಿಸಿರುವ ಮನವಿಗಳು

* * * * * *

ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ಸಹಾಯಕರ ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 26-07-2021 ರಂದು ನಡೆದ ಇಲಾಖಾ ಮುಂಬಡ್ತಿ ಸಭೆಯಲ್ಲಿ ಅರ್ಹ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರುಗಳಿಗೆ ಪತ್ರಾಂಕಿತ ಸಹಾಯಕರಾಗಿ ಮುಂಬಡ್ತಿ ನೀಡಲು ತೀರ್ಮಾನಿಸಿ ದಿನಾಂಕ: 06-08-2021 ರಂದು ಕೌನ್ಸಿಲಿಂಗ್ ಸಹ ನಡೆಸಲಾಯಿತು.

ಉಲ್ಲೇಖ [4] ರಲ್ಲಿ ಬಡ್ತಿ ಹೊಂದಿರುವ ಈ ಕೆಳಕಂಡ ಅಧಿಕಾರಿಗಳು ಬಡ್ತಿ ಮುಂದೂಡಲು ಕೋರಿ ಸಲ್ಲಿಸಿರುವ ಮನವಿಗಳನ್ನು ಪರಿಶೀಲಿಸಿದೆ. ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು-1977ರ ನಿಯಮ 4ಎ [3] ರಡಿ ನೇಮಕಾತಿ ಪ್ರಾಧಿಕಾರವು ಒಪ್ಪಿರುವುದಿಲ್ಲ.

ಆದ ಕಾರಣ. ಈ ಕೆಳಕಂಡ ಅಧಿಕಾರಿಗಳಿಗೆ ಅವರುಗಳ ಜೇಷ್ಠತೆ ಅನುಸಾರ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014 ದಿನಾಂಕ: 06-02-2021 ರ ಅದೇಶದಂತೆ ಅಂಗವಿಕಲ ನೌಕರರಿಗೆ ಆದ್ಯತೆ ನೀಡಿ ಕೌನ್ಸಿಲಿಂಗ್ ಮುಖೇನ ಸ್ಥಳವನ್ನು ಆಯ್ಕೆಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ..

| ಕ್ರ.ಸಂ | ಜೇಷ್ಠತಾ ಸಂಖ್ಯೆ | ಪತ್ರಾಂಕಿತ ವ್ಯವಸ್ಥಾಪಕರ ಹಸೆರು ಮತ್ತು ವಿಳಾಸ. ಶ್ರೀ / ಶ್ರೀಮತಿ |
|---|---|---|
| 01 | 210 | ಬಿ.ಕೃಷ್ಣಮೂರ್ತಿ ನಾಯ್ಕ, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕುಂದಾಪುರ, ಉಡುಪಿ ಜಿಲ್ಲೆ. |
| 02 | 224 | ಎಂ.ಎಲ್. ಶ್ರೀನಿವಾಸ ಮೂರ್ತಿ, ಸಹಾಯಕ ನಿರ್ದೇಶಕರು, ಶಿಕ್ಷಕರ ಕಲ್ಯಾಣ ನಿಧಿ, ಬೆಂಗಳೂರು. |

ಮೇಲ್ಕಂಡ ಅಧಿಕಾರಿಗಳಿಗೆ ದಿನಾಂಕ: 18-08-2021 ರಂದು ಬೆಳಿಗ್ಗೆ 11-00 ಗಂಟೆಗೆ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇಲ್ಲಿ ಸ್ಥಳ ನಿಯುಕ್ತಿಗೆ ಕೌನ್ಸಿಲಿಂಗ್ ಹಮ್ಮಿಕೊಳ್ಳಲಾಗಿದೆ. ಅಂದು ಕೌನ್ಸಿಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳಲು ಸೂಚಿಸಿದೆ.

**-:ಖಾಲಿ ಹುದ್ದೆಗಳ ಮಾಹಿತಿ:-**

| ಕ್ರ. ಸಂ | ಖಾಲಿ ಹುದ್ದೆ ಇರುವ ಕಛೆರಿ ಹೆಸರು ಮತ್ತು ವಿಳಾಸ |
|---|---|
| 01 | ಉಪ ನಿರ್ದೇಶಕರ ಕಛೇರಿ, ಕೋಲಾರ ಜಿಲ್ಲೆ |
| 02 | ಉಪ ನಿರ್ದೇಶಕರ ಕಛೇರಿ, ಚಿತ್ರದುರ್ಗ ಜಿಲ್ಲೆ. |
| 03 | ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಜಿಲ್ಲೆ |

ಡಾ.ಎಸ್.ರೂಪಶ್ರೀ, ಕೆ.ಎ.ಎಸ್
ಜಂಟಿ ನಿರ್ದೇಶಕರು [ಆಡಳಿತ]

ಇವರಿಗೆ:

01. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ,ಉಡುಪಿ ಜಿಲ್ಲೆ ಅಗತ್ಯ ಕ್ರಮಕ್ಕಾಗಿ.
02. ಉಪ ನಿರ್ದೇಶಕರು ಹಾಗೂ ವಿಶೇಷಾಧಿಕಾಗಳು, ಶಿಕ್ಷಕರ ಕಲ್ಯಾಣ ನಿಧಿ, ಬೆಂಗಳೂರು ಅಗತ್ಯ ಕ್ರಮಕ್ಕಾಗಿ.
03. ಸಂಬಂದಿಸಿದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
04. ಸಂಬಂಧಿಸಿದ ಅಧಿಕಾರಿಗಳಿಗೆ.
05. ಈ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್-www.schooleducation.kar.in "ನಲ್ಲಿ ಪ್ರಕಟಿಸಲಾಗಿದೆ.
06. ಕಛೇರಿ ಪ್ರತಿ.